# ಬಳ್ಳಾರಿ ಲೋಕಸಭಾ ಚುನಾವಣೆಅಂತಿಮ ಕಣದಲ್ಲಿ 10 ಅಭ್ಯರ್ಥಿಗಳು: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಮಾಹಿತಿ

ಬಳ್ಳಾರಿ,ಏ.22-:09-ಬಳ್ಳಾರಿ (ಪ.ಪಂ) ಲೋಕಸಭಾ ಚುನಾವಣೆಗೆ ಸಲ್ಲಿಕೆಯಾಗಿದ್ದ ನಾಮಪತ್ರಗಳನ್ನು ಹಿಂಪಡೆಯುವ ದಿನವಾದ ಸೋಮವಾರದಂದು, ಓರ್ವ ಅಭ್ಯರ್ಥಿಯು ತಮ್ಮ ಉಮೇದುವಾರಿಕೆಯನ್ನು ವಾಪಸ್ ತೆಗೆದುಕೊಂಡಿದ್ದು, ಅಂತಿಮ ಕಣದಲ್ಲಿ 10 ಅಭ್ಯರ್ಥಿಗಳು ಇದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.ಇಂದು, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದ ಕೆಸ್ವಾನ್ ವಿಡಿಯೋ (ವಿಸಿ ಹಾಲ್) ಸಭಾಂಗಣದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.ಏ.12 ರಿಂದ 19 ರವರೆಗೆ ನಾಮಪತ್ರ ಸಲ್ಲಿಕೆಯ ಅವಧಿಯಲ್ಲಿ ಒಟ್ಟು 11 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಏ.20 ರಂದು ನಡೆದ ನಾಮಪತ್ರಗಳ ಪರಿಶೀಲನೆಯಲ್ಲಿ 11 ಅಭ್ಯರ್ಥಿಗಳ ನಾಮಪತ್ರಗಳು ಕ್ರಮವಾಗಿದ್ದವು. ನಾಮಪತ್ರ ವಾಪಸ್ಸು ಪಡೆಯುವ ದಿನವಾದ ಏ.22 (ಸೋಮವಾರ) ರಂದು ಪಕ್ಷೇತರ ಅಭ್ಯರ್ಥಿ ಬಿ.ಭಾಗ್ಯಲಕ್ಷ್ಮಿ ತಮ್ಮ ಉಮೇದುವಾರಿಕೆಯನ್ನು ಹಿಂಪಡೆದಿದ್ದಾರೆ ಎಂದು ತಿಳಿಸಿದರು.

*ಅಂತಿಮ ಕಣದಲ್ಲಿ 10 ಅಭ್ಯರ್ಥಿಗಳು:*ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳಾದ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಈ.ತುಕಾರಾಮ್, ಬಹುಜನ ಸಮಾಜ ಪಾರ್ಟಿಯ ಅಭ್ಯರ್ಥಿ ವಾಲ್ಮೀಕಿ ಕೃಷ್ಣಪ್ಪ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಬಿ.ಶ್ರೀರಾಮುಲು, ಅದೇರೀತಿಯಾಗಿ ನೋಂದಾಯಿತ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಾದ (ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳನ್ನು ಹೊರತುಪಡಿಸಿ) ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಸಿ.ಚನ್ನವೀರ, ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಷ್ಟ್) ಪಕ್ಷದ ಅಭ್ಯರ್ಥಿ ಎ.ದೇವದಾಸ್, ಪ್ರಹರ್ ಜನಶಕ್ತಿ ಪಾರ್ಟಿಯ ಅಭ್ಯರ್ಥಿ ಮಂಜಪ್ಪ, ನವಭಾರತ್ ಸೇನ ಪಕ್ಷದ ಅಭ್ಯರ್ಥಿ ಜಿ.ಸ್ವಾಮಿ ಮತ್ತು ಪಕ್ಷೇತರ ಅಭ್ಯರ್ಥಿಗಳಾದ ಅರುಣ್ ಎಸ್ ಹಿರೇಹಾಳ್, ವೈ.ಪಂಪಾಪತಿ, ವೀರೇಶ ಅಂತಿಮ ಕಣದಲ್ಲಿರುವ ಅಭ್ಯರ್ಥಿಗಳಾಗಿದ್ದಾರೆ ಎಂದು ವಿವರಿಸಿದರು.ಈಗಾಗಲೇ ಪಕ್ಷೇತರ ಅಭ್ಯರ್ಥಿಗಳಿಗೆ ಚಿಹ್ನೆ ಕೂಡ ಹಂಚಿಕೆ ಮಾಡಲಾಗಿದ್ದು, ಮೇ 07 ರಂದು ಮತದಾನ ನಡೆಯಲಿದೆ ಎಂದರು.*ಮತದಾನ ದಿನದಂದು ಅಗತ್ಯ ವ್ಯವಸ್ಥೆ:*ಬೇಸಿಗೆ ಬಿಸಿಲಿರುವುದರಿಂದ ಮತದಾನ ದಿನದಂದು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಮತಗಟ್ಟೆಗಳಲ್ಲಿ ಮತದಾರರು ನಿಲ್ಲಲು ನೆರಳು ಇಲ್ಲದಿರುವೆಡೆ ಶ್ಯಾಮಿಯಾನ ವ್ಯವಸ್ಥೆ ಮಾಡಲಾಗುವುದು ಅಲ್ಲದೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ಹಾಗೂ ಇತರೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು.ಮತದಾರರನ್ನು ಮತಗಟ್ಟೆಗೆ ಸೆಳೆಯಲು 40 ಸಖಿ ಮಹಿಳಾ ಮತಗಟ್ಟೆಗಳು, 12 ಎಥ್ನಿಕ್, 08 ವಿಶೇಷಚೇತನ ಹಾಗೂ 08 ಯುವ ಮತಗಟ್ಟೆಗಳು, ಥೀಮ್ ಆಧಾರಿತ 8 ಮತಗಟ್ಟೆ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದರು.ಜಿಲ್ಲೆಯ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಈಗಾಗಲೇ ಹಲವಾರು ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಿದರು.ಚುನಾವಣಾ ಅಕ್ರಮ ತಡೆಯಲು 1950 ಟೋಲ್ ಫ್ರೀ ಸಂಖ್ಯೆ ಬಳಸಿ:*ಚುನಾವಣಾ ಅಕ್ರಮಗಳಿಗೆ ಸಂಬಂಧಿಸಿದಂತೆ ಮಾದರಿ ನೀತಿ ಸಂಹಿತೆ ಉಲ್ಲಂಘನೆ, ಹಣ-ಉಡುಗೋರೆ ಹಂಚುವುದು ಹಾಗೂ ಚುನಾವಣೆ ಸಂಬಂಧಿತ ಇತರೆ ಮಾಹಿತಿಗಾಗಿ ಟೋಲ್ ಫ್ರೀ ಸಂಖ್ಯೆ 1950 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಅಥವಾ ಸಿ-ವಿಜಿಲ್ ಆಪ್ ಮೂಲಕ ದೂರು ಸಲ್ಲಿಸಬಹುದು ಎಂದರು.

ಚುನಾವಣಾ ಕಾರ್ಯಗಳಲ್ಲಿ ಮಕ್ಕಳನ್ನು ಬಳಸಿಕೊಳ್ಳುವಂತಿಲ್ಲ:*ಚುನಾವಣೆ ಕಾರ್ಯ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗ ಹಾಗೂ ಚುನಾವಣಾ ಆಯೋಗದ ನಿರ್ದೇಶನವಿದ್ದು, ಯಾವುದೇ ಪಕ್ಷಗಳು ಅಥವಾ ಅಭ್ಯರ್ಥಿಗಳು 18 ವರ್ಷದೊಳಗಿನ ಮಕ್ಕಳನ್ನು ಚುನಾವಣಾ ಪ್ರಚಾರಕ್ಕೆ ಬಳಸಿಕೊಂಡಲ್ಲಿ ಕಾಯ್ದೆಯನ್ವಯ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಡಿಸಿ ಮಿಶ್ರಾ ಅವರು ಖಡಕ್ ಸೂಚನೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಇದ್ದರು

# ರಾಜ್ಯದ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ- ಅನೀಲ್ ಕುಮಾರ್ ಆರೋಪ




ಬಳ್ಳಾರಿ ಏ: . ಹಿಂದು ರಾಜ್ಯದಲ್ಲಿ ಹಿಂದು ಗಳಿಗೆ ರಕ್ಷಣೆ ಇಲ್ಲ. ಹಾಗಾಗಿ ದಿನೆ ದಿನೆ ಮಹಿಳೆಯರ ಕೊಲೆ, ರೆಪ್ ಗಳಂತಹ ದುರ್ಘಟನೆ ರಾಜ್ಯದಲ್ಲಿ ನಡೆಯುತ್ತಿದೆ. ಇದಕ್ಕೆ ರಾಜ್ಯ ಸರ್ಕಾರದ ಕಾನೂನು ಸುವ್ಯವಸ್ಥೆ ಸಂಪೂರ್ಣ ದಹಗೆಟ್ಟಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಅನೀಲ್ ಕುಮಾರ್ ಮೋಕ ಅವರು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದುರು.ನಗರದ ವಾಜಪೇಯಿ ಬಡಾವಣೆಯಲ್ಲಿ ಇರುವ ಬಿಜೆಪಿ ಕಚೇರಿಯಲ್ಲಿ ಭಾನುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯ ಸರ್ಕಾರದ ಆಡಳಿತ ವ್ಯವಸ್ಥೆ ಹದಗೆಟ್ಟಿರುವುದಕ್ಕೆ ಮೊನ್ನೆ ನಡೆದ ಹುಬ್ಬಳ್ಳಿಯ ಬಿವಿಬಿ ಕಾಲೇಜ್ ಆವರಣದಲ್ಲಿ ಆದ ನೇಹಾ ಹೀರೆಮಠ ಅವರ ಕೊಲೆ ಕಾರಣವಾಗಿದೆ. ಇದೇ ರೀತಿ ರಾಜ್ಯದಲ್ಲಿ ಅನೇಕ ಕಡೆ ಪ್ರಕರಣಗಳು ಬೆಳಕಿಗೆ ಬಂದಿದೆ. ಆದರೆ ಸರ್ಕಾರ ಆರೋಪಿಗಳನ್ನು ರಕ್ಷಣೆ ಮಾಡುವ ಕೆಲಸ ಮಾಡುತ್ತಿದೆ ಎಂದರು.ಹುಬ್ಬಳ್ಳಿಯ ನೇಹಾ ಹಿರೇಮಠ ಅವರ ಅಮಾನುಳ ಹತ್ಯೆ ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸಿದೆ. ಅದರೆ, ತನ್ನದೇ ಪಕ್ಷದ ಚುನಾಯಿತ ಪ್ರತಿನಿಧಿಯ ಮಗಳಿಗೆ ಬದುಕಿನ ಗ್ಯಾರಂಟಿ ಇಲ್ಲದಂತಾಗಿದೆ. ಸಾವಿಗೀಡಾದ ಹೆಣ್ಣು ಮಗಳ ಬಗ್ಗೆ ಹಗುರವಾಗಿ ಮಾತಾಡುವ ಕಾಂಗ್ರೆಸ್, ಫಯಾಜ್ ಮನೆಗೆ ಪೊಲೀಸ್ ಭದ್ರತೆ ಕೊಡುತ್ತದೆ. ಕಾಂಗ್ರೆಸ್ ಸರ್ಕಾರ ಬಂದ ನಂತರ ಮತಾಂಧಶಕ್ತಿಯ ಅಟ್ಟಹಾಸ ಅತಿರೇಕಕ್ಕೇರಿದೆ. ತುಷ್ಟಿಕರಣದ ಅತಿರೇಕ ಇದಕ್ಕೆಲ್ಲ ನೇರ ಕಾಂಗ್ರೆಸ್ ಕಾರಣವಾಗಿದೆ.ರಾಜ್ಯದ ಕಾನೂನು ಸುವ್ಯವಸ್ಥೆಯ ಬಗ್ಗೆ ಜನರು ಆತಂಕ ಪಟ್ಟು ತಮ್ಮ ಬದುಕಿನ ಗ್ಯಾರಂಟಿಯನ್ನು ಕಳೆದುಕೊಂಡಿದ್ದಾರೆ. ಇಷ್ಟೆಲ್ಲ ನಡೆದರೂ ಒಂದು ಖಂಡನೆಯ ಮಾತನ್ನು ಕಾಂಗ್ರೆಸ್ ನವರು ಮಾತಾಡುತ್ತಿಲ್ಲ, ಆದರೆ ಪಕ್ಷಭೇದ ಮರೆತು ಬಿಜೆಪಿ ನಾಯಕರು ಸಾಂತ್ವನ ಹೇಳಲು ತೆರಳಿದ್ದಾರೆ ಎಂದರು.ಈ ಸಂದರ್ಭದಲ್ಲಿ ವಿದಾನ ಪರಿಳತ್ತ್ ಸದಸ್ಯ ವೈ.ಎಂ ಸತೀಶ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ಸೋಮನಗೌಡ,ಅಂಜೀನಪ್ಪ ಸೇರಿದಂತೆ ಇತರರು ಹಾಜರಿದ್ದರು.

## ವಿದ್ಯಾರ್ಥಿ ನಾಪತ್ತೆ

ಬೆಳಗಾವಿ.ಏ.22-: ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಮುಗಳಖೋಡ ಗ್ರಾಮದ ಸಂತೋಳ ತಮ್ಮಾಣ್ಣಿ ಗೋಳಸಂಗಿ 9 ತರಗತಿಯ ವಿದ್ಯಾರ್ಥಿಯು (ಬಾಲಕ) ಏ.13 ರಂದು ಉಣ್ಣಿಬಸವನ ದೇವಸ್ಥಾನದ ಹತ್ತಿರದ, ಹಾರೂಗೇರಿ ಧಾರವಾಡ ಪಾಠ ಶಾಲೆಯ ಬೇಸಿಗೆ ಶಿಬಿರದಿಂದ ಯಾರಿಗೂ ಹೇಳದೇ ಕೇಳದೇ ಎಲ್ಲಿಯೊ ಹೋಗಿ ಕಾಣೆಯಾಗಿರುತ್ತಾನೆ ಎಂದು ಕಾಣೆಯಾದ ವಿದ್ಯಾರ್ಥಿ ತಂದೆ ತಮ್ಮಾಣ್ಣಿ ಗೋಳಸಂಗಿ ಅವರು ಹಾರೂಗೇರಿ ಪೊಲೀಸ್ ಠಾಣೆಗೆ ದೂರ ದಾಖಲಿಸಿದ್ದಾರೆ. ಕಾಣೆಯಾದ ವಿದ್ಯಾರ್ಥಿ ಚಹರೆ: ವಯಸ್ಸು 16 ಇದ್ದು, 5 ಪೂಟ 4 ಇಂಚು ಎತ್ತರ, ಗೋದಿ ಮೈ ಬಣ್ಣ, ಕೋಲು ಮುಖ, ಉದ್ದ ಮೂಗು, ಶಾಲೆಯಿಂದೆ ಹೋಗುವಾಗ ಗುಲಾಬಿ ಬಣ್ಣದ ಟಿ-ಶರ್ಟ್ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ. ಸದರಿ ಕಾಣೆಯಾದ ವಿದ್ಯಾರ್ಥಿ ಮಾಹಿತಿ ದೊರಕಿದಲ್ಲಿ ದೂ.9008060289 ಸಂಖ್ಯೆಗೆ ಸಂಪರ್ಕಿಸಬೇಕು ಎಂದು ಹಾರೂಗೇರಿ ಪೊಲೀಸ್ ಠಾಣೆ ಪಿ.ಎಸ್.ಐ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಬೆಳಗಾವಿಯಲ್ಲಿ ನೇಹಾ ಕೊಲೆಗೆ ಸಿಡಿದೆದ್ದ ಸಂಘಟನೆಗಳು

(1 ನೇ ಪುಟದಿಂದ)

ಜಾಗೃತ ಮಹಿಳಾ ವೇದಿಕೆ ಸಂಘಟನೆ ಪ್ರತಿಭಟನಾ ಮೆರವಣಿಗೂ ಮಾರುತಿ ಗಲ್ಲಿ, ರಾಮದೇವ ಗಲ್ಲಿ, ಖಡೇ ಬಜಾರ ಶನಿವಾರ ಕೂಟ, ಕಾಕತಿ ವೇಸ್ ರೋಡ್ ನಂದ ಚೆನ್ನಮ್ಮ ಸರ್ಕಲ್ ವರಗೆ ಪ್ರತಿಭಟನಾ ಮೆರವಣಿಗೆ ನಡೆಯಿತು . ಜಾಗ್ರತ ಮಹಿಳಾ ವೇದಿಕಾ ಸಂಘಟನಕಾರರು ಮಾತನಾಡಿ ರಾಜ್ಯದಲ್ಲಿ ರಾಜ್ಯದಲ್ಲಿ ಕೋಮು ಗಲಭೆ ಹೆಚ್ಚಿವೆ. ನೇಹಾ ಹಿರೇಮಠಗೆ 9 ಬಾರಿ ಚೂರಿ ಇರಿದು ಹತ್ಯಗೈದಿದ್ದಾನೆ. ಇದರಿಂದ ಅವನ ಮನಸ್ಥಿತಿ ಹೇಗಿರಬರಬಹುದು ಎಂದು ಯೋಚಿಸಿ. ರಾಜ್ಯದ ಮುಖ್ಯಮಂತ್ರಿ ಹಾಗೂ ಗೃಹಸಚಿವರು ಫಯಾಜ್ ನನ್ನು ರಕ್ಷಣೆ ಮಾಡದೆ ಎನ್ ಕೌಂಟರ್ ಮಾಡಬೇಕೆಂದು ಆಕ್ರೋಶ ವ್ಯಕ್ತಪಡಿಸಿದರು.ನ್ಯಾಯವಾದಿ ಸಂಘಟನೆ ಯಿಂದ ಮಾತನಾಡಿ ಹುಬ್ಬಳ್ಳಿಯಲ್ಲಿ ನಡೆದ ನೇಹಾ ಹಿರೇಮಠ ಹತ್ಯೆಯ ಕುರಿತು ರಾಜ್ಯದ ಗೃಹ ಸಚಿವರು ಉಢಾಪೆ ಉತ್ತರ ನೀಡಿದ್ದಾರೆ ರಾಜ್ಯದ ಮಂತ್ರಿ ಮಕ್ಕಳಿಗೆ ಹೀಗೆ ಆಗಿದ್ದೇರೆ ಅರ್ಥವಾಗುತ್ತಿತ್ತು. ಆರೋಪಿಯನ್ನು ರಕ್ಷಣೆ ಮಾಡದೇ ನೇಹಾ ಕೊಂದವನನ್ನು ಎನ್ ಕೌಂಟರ್ ಮಾಡ'ಬೇಕೆಂದು ಆಗ್ರಹಿಸಿದರು.ಹೋರಾಟಗಾರರ ರಾಮಚಂದ್ರ ಮಾತ 'ನಾಡಿ ನೇಹಾಳ ಈಚಿನ ದಿನಗಳಲ್ಲಂತೂ ಹಿಂದೂಗಳನ್ನು ಗುರಿಯಾಗಿಸಿ ದಾಳಿಗಳು ಹೆಚ್ಚುತ್ತಿವೆ. ಸರ್ಕಾರದ ರಕ್ಷಣೆ ಇದೆ ಎಂಬ ಕಾರಣಕ್ಕೆ ಸಮಾಜ ಘಾತುಕ ಶಕ್ತಿಗಳಿಗೂ ಧೈರ್ಯ ಹೆಚ್ಚುವಂತಾಗಿದೆ. ಇದು ರಾಜಕಾರಣ ಮಾಡುವ ವಿಷಯವಲ್ಲ, ಬದಲಿಗೆ ಹಿಂದೂಗಳ ಮತ್ತು ಹೆಣ್ಣುಮಕ್ಕಳ ರಕ್ಷಣೆಯ ವಿಚಾರವಾಗಿದೆ. ಸರ್ಕಾರ ತಕ್ಷಣ ತಪ್ಪಿತಸ್ಥರಿಗೆ ತಕ್ಷ ಶಿಕ್ಷೆ ಕೊಡಿಸುವ ವ್ಯವಸ್ಥೆ ಮಾಡಬೇಕು ಹಾಗೂ ಬೇಜವಾ ಬ್ದಾರಿ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು' ಎಂದು ಅವರು ಒತ್ತಾಯಿಸಿದರು

## ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ಟೆನಿಸ್ ಬಾಲ್ ಮತ್ತು ಕ್ರಿಕೆಟ್ ಪಂದ್ಯಾವಳಿ

ಗದಗ,ಏಪ್ರಿಲ್ 22: ಲೋಕಸಭಾ ಸಾರ್ವತ್ರಿಕ ಚುನಾವಣೆ -2024 ರ ಅಂಗವಾಗಿ ಗದಗ ಜಿಲ್ಲಾ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾಧ್ಯಮ ತಂಡ ಒಳಗೊಂಡ 15 ಸೀಮಿತ ಓವರ್ ಗಳ ಟೆನ್ನಿಸಿ ಬಾಲ್ ಮತ್ತು ಕ್ರಿಕೆಟ್ ಪಂದ್ಯಾವಳಿ ಏಪ್ರಿಲ್ 23 ರಿಂದ 27 ರವರೆಗೆ ಬೆಳಿಗ್ಗೆ 9 ಗಂಟೆಗೆ ಆಯೋಜಿಸಿದ ವಿವರ ಇಂತಿದೆ:ಏಪ್ರಿಲ್ 23 ರಂದು ಮುಂಡರಗಿ ತಾಲೂಕು ಕ್ರೀಡಾಂಗಣದಲ್ಲಿ 2 ನೇ ಪಂದ್ಯಾವಳಿ, ಏಪ್ರಿಲ್ 24 ರಂದು ನಗರದ ವಿ.ಡಿ.ಎಸ್. ಮೈದಾನದಲ್ಲಿ 3 ನೇ ಪಂದ್ಯಾವಳಿ. ಏಪ್ರಿಲ್ 25 ರಂದು ನಗರದ ವಿ.ಡಿ.ಎಸ್. ಮೈದಾದಲ್ಲಿ 4 ನೇ ಪಂದ್ಯಾವಳಿ, ಏಪ್ರಿಲ್ 27 ರಂದು ನಗರದ ವಿ.ಡಿ.ಎಸ್. ಮೈದಾನದಲ್ಲಿ ಅಂತಿಮ ಪಂದ್ಯ ಹಮ್ಮಿಕೊಳ್ಳಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಅವರು ತಿಳಿಸಿದ್ದಾರೆ.

# ಕಾಂಗ್ರೆಸ್ ರೈತರು, ವಿದ್ಯಾರ್ಥಿಗಳು, ದಲಿತರಿಗೆ ಚಂಬು ಕೊಟ್ಟಿದೆ: ಬೊಮ್ಮಾಯಿ

*ಪೂರ್ವ ಸಿದ್ದತೆ ಇಲ್ಲದ ಗ್ಯಾರೆಂಟಿಗಾಗಿ ದಿವಾಳಿ* (1 ನೇ ಪುಟದಿಂದ)

ರಾಜ್ಯ ಸರ್ಕಾರ ಸಂಪೂರ್ಣ ದಿವಾಳಿ ಆಗಿದೆ ಹಣಕಾಸು ವೆಚ್ಚದ ಮೇಲೆ ಹಿಡಿತ ಇಲ್ಲ ಗ್ಯಾರಂಟಿ ಯೋಜನೆಗಳಿಗೆ 54 ಸಾವಿರ ಕೋಟಿ ವೆಚ್ಚ ಆಗತ್ತದೆ. ಅದಕ್ಕೆ ಬೇಕಾದ ಸಿದ್ದತೆ ಮಾಡಿಕೊಂಡಿಲ್ಲ. ಜನರ ತೆರಿಗೆ ಹಣವನ್ನು ಗ್ಯಾರೆಂಟಿ ಗಳಿಗೆ ವೆಚ್ಚ ಮಾಡುತ್ತಿದ್ದಾರೆ. ಇದರಿಂದ ಆರ್ಥಿಕ ಸಂಕಷ್ಟ ಉಂಟಾಗಿದೆ. ಅದನ್ನು ಮರೆ ಮಾಚಲು ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಇಷ್ಟು ದೊಡ್ಡ ಪ್ರಮಾಣದ ಬರ ಬಂದಿದೆ. ಇದುವರೆಗೂ ರಾಜ್ಯ ಸರ್ಕಾರದಿಂದ ಬರ ಪರಿಹಾರ ಕೊಟ್ಟಿಲ್ಲಕೇಂದ್ರದ ಅನುದಾನದಲ್ಲೇ ರೈತರಿಗೆ 2 ಸಾವಿರ ರೂ. ಪರಿಹಾರ ಹಾಕಿದ್ದಾರೆ. ಅದನ್ನೂ ಕೆಲವರಿಗೆ ಕೊಟ್ಟಿದ್ದಾರೆ. ಇನ್ನೂ ಕೆಲವರಿಗೆ ಕೊಟ್ಟಿಲ್ಲ. ರಾಜ್ಯ ಸರ್ಕಾರ ತನ್ನ ಕರ್ತವ್ಯ ಮಾಡಲಿಕೇಂದ್ರದ ಕಡೆ ನೋಡುವುದಲ್ಲ. ಜನ ಸಂಕಷ್ಟದಲ್ಲಿದ್ದಾಗ ಸರ್ಕಾರ ಹೇಗೆ ನಡೆದುಕೊಳ್ಳುತ್ತದೆ ಎನ್ನುವುದು ಮುಖ್ಯ ರಾಜ್ಯ ಸರ್ಕಾರ ಇದರಲ್ಲಿ ವಿಫಲವಾಗಿದೆ ಎಂದು ಹೇಳಿದರು.

*ರಾಜ್ಯ ಸರ್ಕಾರ ಜನರಿಗೆ ಚೊಂಬು ಕೊಟ್ಟಿದೆ*

ಕೇಂದ್ರ ಸರ್ಕಾರದ ಕಿಸಾನ್ ಸಮ್ಮಾನ್ ಯೋಜನೆ ಜೊತೆಗೆ ರಾಜ್ಯ ಸರ್ಕಾರವೂ ರೈತರಿಗೆ 4 ಸಾವಿರ ರೂ. ನೀಡುತ್ತಿತ್ತು. ರಾಜ್ಯ ಸರ್ಕಾರ ಅದನ್ನು ಕಡಿತ ಮಾಡಿ, ರೈತರಿಗೆ ಚಂಬು ಕೊಟ್ಟಿದೆ. ನಮ್ಮ ಸರ್ಕಾರದ ಅವಧಿಯಲ್ಲಿ ರೈತ ವಿದ್ಯಾನಿಧಿ ಯೋಜನೆ ಅಡಿಯಲ್ಲಿ 13 ಲಕ್ಷ ವಿದ್ಯಾರ್ಥಿಗಳಿ ಸ್ಕಾಲರ್ ಶಿಪ್ ಕೊಡಲಾಗಿತ್ತು, ಅದನ್ನು ನಿಲ್ಲಿಸಿದ್ದಾರೆ. ದಲಿತ ಸಮುದಾಯಕ್ಕೆ ಮೀಸಲಿಟ್ಟಿದ್ದ ಎಸ್ಸಿಪಿ ಟಿಎಸ್ಪಿಯ 11380 ಕೋಟಿ ಎಸ್ಸಿಎಸ್ಟಿ ಅನುದಾನವನ್ನ ಗ್ಯಾರಂಟಿಗೆ ಬಳಕೆ ಮಾಡಿಕೊಂಡಿದ್ದಾರೆ. ಇದೆಲ್ಲ ಮಾಡಿ ರಾಜ್ಯದ ಜನತೆಗೆ ಚೊಂಬು ಕೊಟ್ಟಿದ್ದು ರಾಜ್ಯ ಸರ್ಕಾರ ಎಂದು ಆರೋಪಿಸಿದರು.

*ಮೋದಿಯವರದು ಅಕ್ಷಯಪಾತ್ರೆ*

ಪ್ರಧಾನ ನರೇಂದ್ರ ಮೋದಿಯವರು ಜನರಿಗೆ ಶಾಶ್ವತ ಯೋಜನೆಗಳನ್ನು ಕೊಟ್ಟಿದ್ದಾರೆ. ಈ ಮೂಲಕ ಮೋದಿಯವರು ಚೊಂಬನ್ನು ಅಕ್ಷಯ ಪಾತ್ರೆ ಮಾಡಿದ್ದಾರೆ. 6 ಲಕ್ಷ ಬೀದಬದಿ ವ್ಯಾಪಾರಸ್ಥರಿಗೆ ಅನುದಾನ ನೀಡಿದ್ದಾರೆ. 9 ಲಕ್ಷ ಮನೆಗಳಿಗೆ ಉಜ್ವಲ ಗ್ಯಾಸ್ ಸಂಪರ್ಕ ಕಲ್ಪಿಸಿದ್ದಾರೆ. ಪ್ರದಾನ ಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ 4 ಲಕ್ಷ ಮನೆ,12 ಲಕ್ಷ ಶೌಚಾಲಯ, ಕೊವಿಡ್ ಸಂದರ್ಭದಲ್ಲಿ ಹತ್ತು ಕೆಜಿ ಉಚಿತ ಅಕ್ಕಿ ಕೊಟ್ಟಿದ್ದು ನರೇಂದ್ರ ಮೋದಿ, ಚೊಂಬನ್ನು ಅಕ್ಷಯ ಪಾತ್ರೆ ಮಾಡಿದ್ದು ನರೇಂದ್ರ ಮೋದಿ. ಕಾಂಗ್ರೆಸ್ ಒಂದು ಕಾಳು ಅಕ್ಕಿ ಕೊಟ್ಟಿಲ್ಲ, ಇದನ್ನು ಕಾಂಗ್ರೆಸ್ ಚೊಂಬಿಗೆ ಸೇರಿಸಿಕೊಳ್ಳಲಿ ಎಂದರು.

# ಜಿಲ್ಲಾಡಳಿತದಿಂದ ಭಗವಾನ್ ಮಹಾವೀರ ಜಯಂತಿ ಸಾಂಕೇತಿಕ ಆಚರಣೆ



ಬಳ್ಳಾರಿ,ಏ.: .ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಇಂದು ಭಗವಾನ್ ಮಹಾವೀರ ಜಯಂತಿ ಕಾರ್ಯಕ್ರಮವನ್ನು ನಗರದ ಅನಂತಪುರ ರಸ್ತೆಯ ಸಾಂಸ್ಕೃತಿಕ ಸಮುಚ್ಚಯ ಆವರಣದ ಹೊಂಗಿರಣ ಸಭಾಂಗಣದಲ್ಲಿ ಸರಳ ಮತ್ತು ಸಾಂಕೇತಿಕವಾಗಿ ಆಚರಿಸಲಾಯಿತು.

ಲೋಕಸಭಾ ಚುನಾವಣೆ-2024 ಪ್ರಯುಕ್ತ ನೀತಿ ಸಂಹಿತೆ ಜಾರಿಯಿರುವ ಹಿನ್ನಲೆಯಲ್ಲಿ ಭಗವಾನ್ ಮಹಾವೀರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಸರಳವಾಗಿ ಆಚರಿಸಲಾಯಿತು.ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ನಾಗರಾಜ ಸೇರಿದಂತೆ ಮುಖಂಡರು, ಇಲಾಖೆಯ ಸಿಬ್ಬಂದಿ ವರ್ಗದವರು ಹಾಗೂ ಇತರರು ಉಪಸ್ಥಿತರಿದ್ದರು.

# ಬಳ್ಳಾರಿ ಲೋಕಸಭೆ ಚುನಾವಣೆ; 11 ಅಭ್ಯರ್ಥಿಗಳ ನಾಮಪತ್ರ ಕ್ರಮಬದ್ಧ- ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ




ಬಳ್ಳಾರಿ,ಏ.: ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ, ಶನಿವಾರ ನಡೆದ ನಾಮಪತ್ರಗಳ ಪರಿಶೀಲನೆಯಲ್ಲಿ 09-ಬಳ್ಳಾರಿ (ಪ.ಪಂ) ಲೋಕಸಭಾ ಕ್ಷೇತ್ರಕ್ಕೆ ಸಲ್ಲಿಸಿದ್ದ 11 ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ. ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾಧಿಕಾರಿಗಳ ಕಾರ್ಯಾಲಯದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಶನಿವಾರ ನಾಮಪತ್ರಗಳ ಪರಿಶೀಲನೆ ನಡೆಸಿದರು.

*ಕ್ರಮಬದ್ಧವಾಗಿ ನಾಮನಿರ್ದೇಶಿತರಾದ ಉಮೇದುವಾರರ ಪಟ್ಟಿ:*- ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಾದ ಇಂಡಿಯನ್ ನ್ಯಾಳನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಈ.ತುಕಾರಾಮ್, ಬಹುಜನ ಸಮಾಜ ಪಾರ್ಟಿಯ ಅಭ್ಯರ್ಥಿ ವಾಲ್ಮೀಕಿ ಕೃಳ್ಣಪ್ಪ ಮತ್ತು ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ಬಿ.ಶ್ರೀರಾಮುಲು ಈ ಅಭ್ಯರ್ಥಿಗಳ ನಾಮಪತ್ರ ಕ್ರಮಬದ್ಧವಾಗಿವೆ.

ನೋಂದಾಯಿತ ರಾಜಕೀಯ ಪಕ್ಷಗಳ ಅಭ್ಯರ್ಥಿಗಳಾದ (ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ರಾಜಕೀಯ ಪಕ್ಷಗಳನ್ನು ಹೊರತುಪಡಿಸಿ) ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿ ಸಿ.ಚನ್ನವೀರ, ಸೋಷಿಯಲಿಸ್ಟ್ ಯುನಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಳ್ಟ್) ಪಕ್ಷದ ಅಭ್ಯರ್ಥಿ ಎ.ದೇವದಾಸ್, ಪ್ರಹರ್ ಜನಶಕ್ತಿ ಪಾರ್ಟಿಯ ಅಭ್ಯರ್ಥಿ ಮಂಜಪ್ಪ, ನವಭಾರತ್ ಸೇನ ಪಕ್ಷದ ಅಭ್ಯರ್ಥಿ ಜಿ.ಸ್ವಾಮಿ ಅವರ ನಾಮಪತ್ರ ಕ್ರಮಬದ್ಧವಾಗಿವೆ.

ಪಕ್ಷೇತರ ಅಭ್ಯರ್ಥಿಗಳಾದ ಅರುಣ್ ಎಸ್ ಹಿರೇಹಾಳ್, ವೈ.ಪಂಪಾಪತಿ, ಬಿ.ಭಾಗ್ಯಲಕ್ಷ್ಮಿ, ವೀರೇಶ ಅವರ ನಾಮಪತ್ರ ಕ್ರಮಬದ್ಧವಾಗಿವೆ.

ಏ.22 ರಂದು ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನವಾಗಿದ್ದು, ಮೇ 7 ರಂದು ಮತದಾನ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಮತದಾನ ಜಾಗೃತಿ ಅಂಗವಾಗಿ ಮ್ಯಾರಥಾನ್ ಓಟ

## ಎಲ್ಲ ಮತದಾರರು ಮೇ. 07 ರಂದು ತಪ್ಪದೇ ಮತದಾನ ಮಾಡಿ; ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ




ಬಳ್ಳಾರಿ,ಏ.: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮೇ. 07 ರಂದು ಮತದಾನ ನಡೆಯಲಿದ್ದು, ಪ್ರತಿಯೊಬ್ಬ ಮತದಾರರು ಅಂದು ತಪ್ಪದೆ ಮತ ಚಲಾಯಿಸಿ, ಪ್ರಜಾಪ್ರಭುತ್ವವದ ಹಬ್ಬದಲ್ಲಿ ಭಾಗಿಯಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಕರೆ ನೀಡಿದರು.ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತದಾನ ಜಾಗೃತಿ ಅಭಿಯಾನ ಅಂಗವಾಗಿ ಭಾನುವಾರ ನಗರದ ರೈಲ್ವೇ ನಿಲ್ದಾಣದ ಆವರಣದಲ್ಲಿ ಏರ್ಪಡಿಸಿದ್ದ ಮ್ಯಾರಾಥಾನ್ ಓಟ ಕಾರ್ಯಕ್ರಮವನ್ನು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜಿಲ್ಲಾದ್ಯಾಂತ ಹಲವಾರು ಕಾರ್ಯಕ್ರಮಗಳನ್ನು ಸಾರ್ವಜನಿಕರಲ್ಲಿ ಮತದಾನ ಕುರಿತು ಅರಿವು ಮೂಡಿಸಲು ಏರ್ಪಡಿಸಲಾಗುತ್ತಿದ್ದು, ಎಲ್ಲಾ ಮತದಾರರು ತಪ್ಪದೆ ಮತದಾನ ಪ್ರಕ್ರಿಯೆಲ್ಲಿ ಪಾಲ್ಗೊಂಡು ಶೇ.100 ಪ್ರಮಾಣದಷ್ಟು ಮತದಾನವಾಗಲು ಪ್ರತಿಯೊಬ್ಬರು ಮತ ಚಲಾಯಿಸಬೇಕು. ಜಿಲ್ಲೆಯಾದ್ಯಂತ 60,000 ಹೆಚ್ಚೂ ಯುವ ಮತದಾರರಿದ್ದು, ಚುನಾವಣೆಯಲ್ಲಿ ಯುವಕರು ತಪ್ಪದೇ ಮತದಾನ ಮಾಡಬೇಕು ಅಲ್ಲದೆ ಇತರರಿಗೂ ಮತದಾನಕ್ಕೆ ಪ್ರೇರೇಪಿಸುವ ಮೂಲಕ ಹೆಚ್ಚಿನ ಮತದಾನ ಪ್ರಮಾಣ ದಾಖಲಾಗುವಂತೆ ಶ್ರಮಿಸಬೇಕು ಎಂದು ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಚುನಾವಣಾ ಸ್ವೀಪ್ ಐಕಾನ್ ಆದ ನೃತ್ಯಪಟು ಎಸ್.ಕೆ.ಆರ್.ಜಿಲಾನ್ ಬಾಷಾ ಅವರು ಮಾತನಾಡಿ ಚುನಾವಣೆ ಎನ್ನುವುದು ಪ್ರತಿ ಐದು ವಳರ್ಕೊಮ್ಮೆ ಬರುವ ಹಬ್ಬವಾಗಿದ್ದು, ಪ್ರತಿಯೊಬ್ಬ ಮತದಾರರು ಹಳರ್ದಿಂದ ಮತಚಲಾವಣೆ ಮಾಡುವ ಮೂಲಕ ಹಬ್ಬ ಆಚರಿಸಬೇಕು ಎಂದರು.ಮತದಾರರು ನಮ್ಮ ಭಾಗದ ಬಿರು ಬಿಸಿಲಿಗೂ ಜಗ್ಗದೆ, ಸಕ್ರಿಯವಾಗಿ ತೊಡಗಿಕೊಂಡು ಮತ ಚಲಾಯಿಸಿ. ಮೇ.07 ರಂದು ಯುವಕರು ತಪ್ಪದೇ ಮತದಾನ ಹಕ್ಕನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಯುವಕರಿಗೆ ಕರೆ ನೀಡಿದರು.

ಮತ್ತೋರ್ವ ಚುನಾವಣಾ ಸ್ವೀಪ್ ಐಕಾನ್ ಆದ ಅಥ್ಲೇಟಿಕ್ ಪಟು ನಂದಿನ ಅಗಸರ್ ಅವರು ಮಾತನಾಡಿ, ಸದೃಢ ರಾಷ್ಟ್ರ ನಿರ್ಮಾಣಕ್ಕೆ ಪ್ರತಿಯೊಬ್ಬ ಅರ್ಹ ಮತದಾರರು ಮೇ. 07 ರಂದು ತಮ್ಮ ಕೆಲಸದ ಒತ್ತಡದಲ್ಲಿಯೂ ಕೂಡ ಬಿಡುವು ಮಾಡಿಕೊಂಡು ತಪ್ಪದೇ ಮತದಾನ ಮಾಡಬೇಕು ಎಂದರು.

ಭವಿಷ್ಯದ ಉತ್ತಮ ದೇಶಕ್ಕೆ ಎಲ್ಲಾ ಸಾರ್ವಜನಿಕರು, ನಾಗರೀಕರು ಮತ್ತು ಯುವಕರು ಮತ ಚಲಾವಣೆ ಮಾಡಿ ಎಂದು ಹೇಳಿದರು.ಇದೇ ವೇಳೆ ಮತದಾನ ಜಾಗೃತಿಯ ಪ್ರತಿಜ್ಞಾ ವಿಧಿಯನ್ನು ಇದೇ ಸಂದರ್ಭದಲ್ಲಿ ಬೋಧಿಸಲಾಯಿತು.ನಾನು ಹೆಮ್ಮೆಯ ಮತದಾರ ಎನ್ನುವ ಸೆಲ್ಫೀ ಬೂತ್ ಅನ್ನು ರೈಲ್ವೆ ನಿಲ್ದಾಣದಲ್ಲಿ ಸ್ಥಾಪಿಸಿಸಲಾಗಿತ್ತು, ಇದು ಆಕಳರ್ಣೆಯ ಕೇಂದ್ರವಾಗಿ, ಯುವಕರು ಸಂತಸದಿಂದ ಮೊಬೈಳ್ಫಿಗಳಲ್ಲಿ ಫೋಟೋ ಕ್ಲಿಕ್ಕಿಸಿಕೊಂಡರು.

ಈ ಸಂಧರ್ಭದಲ್ಲಿ ಜಿಲ್ಲಾ ಪಂಚಾಯನ್ಥಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಎನ್.ಝುಬೇರ್, ಸಹಾಯಕ ಆಯುಕ್ತ ಹೇಮಂತ್, ಜಿಲ್ಲಾ ಪೊಲೀಸ್ ವರಿಳ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು, ಅರಣ್ಯ ಇಲಾಖೆಯ ಉಪಸಂರಕ್ಷಣಾಧಿಕಾರಿ ಸಂದೀಪ್ ಸೂರ್ಯವಂಶಿ, ಮಹಾನಗರ ಪಾಲಿಕೆಯ ಆಯುಕ್ತ ಜಿ.ಖಲೀಲ್ ಸಾಬ್, ಹೆಚ್ಚುವರಿ ಪೊಲೀಸ್ ವರಿಳ್ಠಾಧಿಕಾರಿ ನವೀನ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ವಿದ್ಯಾರ್ಥಿಗಳು, ಯುವಕರು ಹಾಗೂ ಸಾರ್ವಜನಕರು ಮ್ಯಾರಥಾಬ್ಬನಲ್ಲಿ ಭಾಗವಹಿಸಿದ್ದರು.

# ಎಸ್.ಯು.ಸಿ.ಐ(ಕಮ್ಯುನಿಸ್ಟ್) ಪಕ್ಷದ ಅಭ್ಯರ್ಥಿ ರಾಮಲಿಂಗಪ್ಪ ಪರವಾಗಿ ನರೇಗಾ ಕೂಲಿ ಕಾರ್ಮಿಕರ ನಡುವೆ ಚುನಾವಣಾ ಪ್ರಚಾರ

ಬಳ್ಳಾರಿ ಏ :. ರಾಯಚೂರು ತಾಲ್ಲೂಕಿನ ಗ್ರಾಂತರ ಪ್ರದೇಶದಲ್ಲಿ ನರೇಗಾ ಕೂಲಿ ಕಾರ್ಮಿಕರನ್ನು ಉದ್ದೇಶಿಸಿ ಎಸ್.ಯು.ಸಿ.ಐ( ಕಮ್ಯುನಿಸ್ಟ್) ಪಕ್ಷದ ಜಿಲ್ಲಾ ಸಮಿತಿಯ ಸದಸ್ಯರಾದ ಮಹೇಶ್ ಚಿಕಲಪರ್ವಿ ಅವರು ಮಾತನಾಡಿ, ನಮ್ಮ ಪಕ್ಷದಿಂದ ನರೇಗಾ ಕೂಲಿಯನ್ನು 600 ಕ್ಕೆ ಹಾಗೂ ಮಾನವ ದಿನಗಳನ್ನು 200ಕ್ಕೆ ಹೆಚ್ಚಿಸಬೇಕೆಂದು ಹಲವು ಹೋರಾಟಗಳನ್ನು ಕಟ್ಟಿದೆ ಎಂದರು. ಈ ಮೊದಲು ನರೇಗಾ ಯೋಜನೆ ಜಾರಿಯಾದ ಸಂದರ್ಭದಲ್ಲಿ 1.35ಲಕ್ಷ ಕೋಟಿ ಅನುದಾನ ನೀಡಲಾಗುತ್ತಿತ್ತು.ಆದರೆ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಪ್ರತಿ ವರ್ಷ ಅನುದಾನ ಕಡಿತ ಮಾಡುತ್ತಾ ಬಂದಿದೆ. ಈಗ ಕೇವಲ 65ಸಾವಿರ ಕೋಟಿ ಕೊಡುತ್ತಿದೆ. ಉದ್ಯೋಗ ಖಾತ್ರಿ ಯೋಜನೆ ಗ್ರಾಮೀಣ ಜನರಿಗೆ ಆಸರೆಯಾಗಿದೆ ಎಂದರು. 2023-24 ಸಾಲಿನ 950ಕೋಟಿ ಕೂಲಿ ಹಣ ಇನ್ನೂ ಬಾಕಿ ಉಳಿಸಿಕೊಂಡಿದೆ. ರಾಯಚೂರು ಜಿಲ್ಲೆಯ 14ಕೋಟಿ ಕೂಲಿ ಹಣ ಇನ್ನೂ ಬಿಡುಗಡೆ ಮಾಡಿಲ್ಲ. ಇದರ ವಿರುದ್ಧ ನಮ್ಮ ಪಕ್ಷ ಹೋರಾಟ ನಡೆಸುತ್ತಿದೆ. ಅಧಿಕಾರಕ್ಕೆ ಬಂದ ಯಾವ ಸರ್ಕಾರಗಳು ಕೂಲಿ ಕಾರ್ಮಿಕರ ಪರವಾಗಿ ನೀತಿಗಳನ್ನು ಜಾರಿಗೆಗೊಳಿಸುತ್ತಿಲ್ಲ. ಅದರ ಬದಲು ಶ್ರೀಮಂತರ ಪರವಾದ ನೀತಿಗಳನ್ನು ಜಾರಿಗೊಳಿಸುತ್ತಿದ್ದಾರೆ. ಇಂತಹ ಬಂಡವಾಳಶಾಹಿ ಪಕ್ಷಗಳನ್ನು ಸೋಲಿಸಿ ಹೋರಾಟ ನಿರತ ಎಸ್.ಯು.ಸಿ.ಐ(ಸಿ) ಪಕ್ಷವನ್ನು ಗೆಲ್ಲಿಸಬೇಕೆಂದು ಕೂಲಿ ಕಾರ್ಮಿಕರಿಗೆ ಮನವಿ ಮಾಡಿದರು.

ಇಂದು ಎಸ್ ಯು ಸಿ ಐ( ಕಮ್ಯುನಿಸ್ಟ್) ಪಕ್ಷ ರಾಮಲಿಂಗಪ್ಪ ಪರವಾಗಿ ಎರಡನೇ ದಿನದ ಪ್ರಚಾರ ಜಾಥಾ ಆಶಾಪುರ, ಉಡುಮಗಲ್ ಖಾನಾಪುರ, ನಾಗಲಾಪುರ, ಪೂರ್ತಿಪ್ಲಿ, ಮಟಮಾರಿ , ಈರಾಪುರ, ಹನುಮಾಪುರ, ಎಲೆಬಿಚ್ಚಾಲಿ, ಹಾಗೂ ಗಿಲ್ಲೆಸೂಗುರು ಮಾರ್ಗವಾಗಿ ಪ್ರಚಾರ ಕಾರ್ಯ ನಡೆಯಿತು. ಅಲ್ಲದೆ ಬಿಜ್ಜನಗೇರ, ಸಿದ್ರಾಮಪುರ, ಆಯಜಾಪುರ, ಮಾಸದೊಡ್ಡಿ, ಜಂಬಲದಿನ್ನಿ ಗ್ರಾಮಗಳಲ್ಲೂ ಸಹ ಪ್ರಚಾರ ನಡೆಸಲಾಯಿತು. ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಸಮಿತಿಯ ಸದಸ್ಯರಾದ ಅಣ್ಣಪ್ಪ, ಕಾರ್ಯಕರ್ತರಾದ, ಹಯ್ಯಾಳಪ್ಪ, ಪೀರ್ ಸಾಬ್, ಯಲ್ಲಪ್ಪ, ಮಲ್ಲನಗೌಡ ಅಂಚೆಸುಗುರು, ನತಿನ್ , ಜಾಫರ್ ಇನ್ನಿತರ ಇದ್ದರು.

ಅಲ್ಲದೆ ಬಿಜ್ಜನಗೇರ, ಸಿದ್ರಾಮಪುರ, ಆಯುಜಾಪುರ, ಮಾಸದೊಡ್ಡಿ, ಜಂಬಲದಿನ್ನಿ ಗ್ರಾಮಗಳಲ್ಲೂ ಸಹ ಪ್ರಚಾರ ನಡೆಸಲಾಯಿತು. ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾ ಸಮಿತಿಯ ಸದಸ್ಯರಾದ ಅಣ್ಣಪ್ಪ, ಕಾರ್ಯಕರ್ತರಾದ, ಹಯ್ಯಾಳಪ್ಪ, ಪೀರ್ ಸಾಬ್, ಯಲ್ಲಪ್ಪ, ಮಲ್ಲನಗೌಡ ಅಂಚೆಸುಗುರು, ನತಿನ್ , ಜಾಫರ್ ಇನ್ನಿತರ ಇದ್ದರು.